**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ**

ಸಿ.ಸಿ.ನಂ: 437/2017 ಸಿ.ಡಬ್ಲ್ಯೂ –03 ಪಿ.ಡಬ್ಲ್ಯೂ -06

| | | |
|---|---|---|
| ಹೆಸರು | : | ಕಮ್ರೂದ್ದೀನ್ |
| ತಂದೆ | : | ಹಾರುನ್ ಅನ್ಸಾರಿ |
| ವಯಸ್ಸು | : | ೪೦ ವರ್ಷ |
| ಉದ್ಯೋಗ | : | ಖಾಸಗಿ ಉದ್ಯೋಗ |
| ವಾಸಸ್ಥಳ | : | ಆಳಂದ |

ದಿನಾಂಕ: ೨೭.೦೩.೨೦೨೫

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿ ಪರಿಚಯ ಇರುವುದಿಲ್ಲ. ಚಾಸಾ-1, 2, 4 ರಿಂದ 8 ರವರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ, ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಪೋಲಿಸರು ಒಂದು ದಾಖಲೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-೬ ಮತ್ತು ಸಹಿಯನ್ನು ನಿಪಿ-೬(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು : ಸ.ಸ.ಅ. ವಕೀಲರಿಂದ.**

ಈಗ ಓದಿ ಹೇಳಿದ ಹಾಗೆ ನನ್ನ ಮತ್ತು ಚಾಸಾ-೩ ರವರ ಸಮಕ್ಷಮ ಪೋಲಿಸರು ಪಂಚನಾಮೆ ಜರುಗಿಸಿ ವಾಹನಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎಸ್.ಡಿ.ಬಿ. ವಕೀಲರಿಂದ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ:-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ.ಆಳಂದ